ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆರಹಿತ ಪ್ರಶ್ನೆ ಸಂಖ್ಯೆ	:	**85**
ಸದಸ್ಯರ ಹೆಸರು	:	ಶ್ರೀ. ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	02.03.2020
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ.	ಬೆಂಗಳೂರು ಮೈಸೂರು ವಿಭಾಗಗಳಲ್ಲಿ ಪ್ರೌಢಶಾಲಾ ಸಹ ಶಿಕ್ಷಕರಿಂದ ಮುಖ್ಯ ಶಿಕ್ಷಕರ ಹುದ್ದೆಗಳಿಗೆ ಮುಂಬಡ್ತಿ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
ಆ.	ಈ ವಿಭಾಗಗಳಲ್ಲಿ ಇದುವರೆವಿಗೂ ಮುಂಬಡ್ತಿ ನೀಡದೆ ಇರಲು ಕಾರಣಗಳೇನು;	ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿಯಿದ್ದ ಶ್ರೀ ಬಿ.ಕೆ ಪವಿತ್ರ ಪ್ರಕರಣದಿಂದಾಗಿ ಕಳೆದ ಕೆಲವು ವರ್ಷಗಳಿಂದ ಮುಂಬಡ್ತಿ ನೀಡಲು ಸಾಧ್ಯವಾಗಿರುವುದಿಲ್ಲ. ಅಂತಿಮ ಆದೇಶ ಬಂದಿರುವ ಹಿನ್ನೆಲೆಯಲ್ಲಿ ಮುಂಬಡ್ತಿ ನೀಡಲು ಕ್ರಮವಹಿಸಲಾಗುತ್ತಿದೆ. ಬೆಂಗಳೂರು, ಮೈಸೂರು ವಿಭಾಗಗಳಲ್ಲಿ ಹಾಲಿ ಚಾಲ್ತಿಯಲ್ಲಿದ್ದ ಪ್ರೌಢ ಶಾಲಾ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯಲ್ಲಿ ಲೋಪದೋಷಗಳು ಕಂಡು ಬಂದಿವೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಪತ್ರ ಸಂಖ್ಯೆ: ಇಡಿ 152 ಎಲ್‌ಬಿಪಿ 2014, ದಿನಾಂಕ:20/05/2014ರಲ್ಲಿ ನೀಡಿರುವ ನಿರ್ದೇಶನಗಳಂತೆ, ಪ್ರೌಢಶಾಲಾ ಸಹ ಶಿಕ್ಷಕರ ಜ್ಯೇಷ್ಠತಾ ಪಟ್ಟಿಯನ್ನು ಹಾಗೂ ರೋಸ್ಟರ್ ಮೆರಿಟ್ ಆಧಾರದ ಮೇಲೆ, ಬೆಂಗಳೂರು ಮತ್ತು ಮೈಸೂರು ವಿಭಾಗವಾರು ಪ್ರತ್ಯೇಕವಾಗಿ ಅಂತಿಮಗೊಳಿಸಬೇಕಾಯಿತು. ಈ ಕಾರಣದಿಂದ ಮುಂಬಡ್ತಿ ಪ್ರಕ್ರಿಯೆ ವಿಳಂಬವಾಗಿರುತ್ತದೆ.
ಇ	ಈ ಸಂಬಂಧ ಇದುವರೆವಿಗೂ ಕೈಗೊಂಡ ಕ್ರಮಗಳೇನು;	ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ಅಂತಿಮ ಜ್ಯೇಷ್ಠತಾ ಪಟ್ಟಿಯನ್ನು ಬೆಂಗಳೂರು ಮತ್ತು ಮೈಸೂರು ವಿಭಾಗವಾರು ಪ್ರತ್ಯೇಕವಾಗಿ ದಿನಾಂಕ:06/02/2020ರಂದು ಪ್ರಕಟಿಸಲಾಗಿದೆ. ಅಂತಿಮ ಜ್ಯೇಷ್ಠತಾ ಪಟ್ಟಿಯ ಅನುಸಾರ, ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ, ಮುಖ್ಯ ಶಿಕ್ಷಕರ ವೃಂದಕ್ಕೆ, ಅರ್ಹರಾಗುವ ಶಿಕ್ಷಕರುಗಳ ತಾತ್ಕಲಿಕ ಆದ್ಯತಾ ಪಟ್ಟಿಯನ್ನು ದಿನಾಂಕ:07/02/2020ರಂದು ಪ್ರಕಟಿಸಿದೆ. ಬಡ್ತಿ ನೀಡುವ ಸಂಬಂಧ ಕಾರ್ಯ ನಿರ್ವಹಣಾ ವರದಿ ಹಾಗೂ ಪೂರಕ ದಾಖಲೆಗಳನ್ನು ಪಡೆಯಲಾಗಿದ್ದು, ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ ಮುಖ್ಯ ಶಿಕ್ಷಕರ ವೃಂದಕ್ಕೆ ಬಡ್ತಿ ನೀಡುವ ಪ್ರಕ್ರಿಯೆ ಚಾಲನೆಯಲ್ಲಿದೆ.
ಈ	ಯಾವ ಕಾಲಮಿತಿಯಲ್ಲಿ ಮುಂಬಡ್ತಿ ನೀಡಲಾಗುವುದು?	

ಸಂಖ್ಯೆ: ಇಡಿ 19 ಎಸ್‌ಓಹೆಚ್ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು